ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳ ಕೊರತೆ

444(827); ಶ್ರೀ ಐಹೊಳೆ ಡಿ ಮಹಾಲಿಂಗಪ್ಪ (ರಾಯಬಾಗ)

ಅ) ಬೆಳಗಾವಿ ಜಿಲ್ಲೆ ರಾಯಬಾಗ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿಗಳ ಹಾಗೂ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ (ವಿವರ ಒದಗಿಸುವುದು);

ಆ) ಸದರಿ ಆಸ್ಪತ್ರೆಗೆ ಪೂರ್ಣಪ್ರಮಾಣ ವೈದ್ಯರನ್ನು ಮತ್ತು ಸಿಬ್ಬಂದಿಗಳನ್ನು ನೇಮಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು (ವಿವರ ಒದಗಿಸುವುದು)?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿದೆ

ಕ್ರ ಸಂ	ಹುದ್ದೆಯ ಪದನಾಮ	ಮಂಜೂರಾದ ಹುದ್ದೆಗಳ ಸಂಖ್ಯೆ	ಕಾರ್ಯನಿರತ ಹುದ್ದೆಗಳ ಸಂಖ್ಯೆ	ಖಾಲಿ ಹುದ್ದೆಗಳ ಸಂಖ್ಯೆ
1	ಮುಖ್ಯ ವೈದ್ಯಾಧಿಕಾರಿ	1	1	0
2	ತಜ್ಞ ವೈದ್ಯರು	9	3	6
3	ದಂತ ವೈದ್ಯಾಧಿಕಾರಿ	1	1	0
4	ಸಹಾಯಕ ಆಡಳಿತಾಧಿಕಾರಿ	1	0	1
5	ಕಛೇರಿ ಅಧೀಕ್ಷಕರು	1	0	1
6	ಶುಶ್ರೂಷಣಾಧಿಕಾರಿ ಗ್ರೇಡ್-2	1	0	1
7	ಹಿರಿಯ ಔಷಧ ವಿತರಕರು	1	0	1
8	ಹಿ.ಪ್ರ. ತಂತ್ರಜ್ಞರು	1	1	0
	ಕಿ.ಪ್ರ. ತಂತ್ರಜ್ಞರು	1	1	0
9	ಶುಶ್ರೂಷಕಿ	20	17	3
10	ಕ್ಷ-ಕಿರಣ ತಂತ್ರಜ್ಞರು	2	2	0
11	ಕಿರಿಯ ಔಷಧಿ ವಿತರಕರು	2	1	1

12	ಪ್ರದಸ	2	0	2
13	ದ್ವಿದಸ	2	1	1
	ಕಿಮಆ ಸಹಾಯಕಿ	2	0	2
14	ಬೆರಳಚ್ಚು-ಕಂ-ಸಹಾಯಕ	1	0	1
15	ನೇತ್ರ ಸಹಾಯಕ	1	1	0
16	ವಾಹನ ಚಾಲಕ	2	2	–
17	ಗ್ರೂಪ 'ಡಿ'	33	1	32
	ಒಟ್ಟು	**84**	**32**	**52**

ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡ ಕ್ರಮದ ಬಗ್ಗೆ ಅನುಬಂಧದಲ್ಲಿ ನೀಡಲಾಗಿದೆ.

ಅನುಬಂಧ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿಯಿರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ, ತಜ್ಞ ವೈದ್ಯರು, ಮತ್ತು ಇತರೆ ಸಿಬ್ಬಂದಿ ಹುದ್ದೆಗಳನ್ನು ತುಂಬಲು ತೆಗೆದುಕೊಂಡ ಕ್ರಮಗಳ ವಿವರಗಳು:

1. ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ (ಎನ್.ಆರ್ ಹೆಚ್.ಎಂ)ದ ಅಡಿಯಲ್ಲಿ ಸ್ತ್ರೀರೋಗ ತಜ್ಞತೆ, ಅರವಳಿಕೆ ಹಾಗೂ ಮಕ್ಕಳ ತಜ್ಞತೆಯಲ್ಲಿ ಗೌರವ ಧನದ ಆಧಾರದ ಮೇಲೆ ತಜ್ಞವೈದ್ಯರನ್ನು ನೇಮಿಸಿಕೊಳ್ಳಲು ಸಿ-ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ₹ 80,000 ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ₹ 60,000 ದಂತೆ ನೀಡಲು ಅವಕಾಶ ಕಲ್ಪಿಸಲಾಗಿದೆ
2. ಕೆ.ಹೆಚ್.ಎಸ್.ಡಿ.ಆರ್.ಪಿ ಯೋಜನೆಯಡಿಯಲ್ಲಿ ಇತರೆ ತಜ್ಞತೆಗಳಿಗೆ (ಮಕ್ಕಳ ತಜ್ಞರು, ಸ್ತ್ರೀರೋಗ ತಜ್ಞರು ಹಾಗೂ ಅರವಳಿಕೆ ತಜ್ಞರನ್ನು ಹೊರತುಪಡಿಸಿ) ಸಂಬಂಧಪಟ್ಟಂತೆ, ಮೇಲೆ ತಿಳಿಸಿದ ಜಿಲ್ಲೆಗಳಲ್ಲಿ ಕ್ರಮವಾಗಿ ಮಾಸಿಕ ₹ 65,000 ಹಾಗೂ ₹ 50,000 ದಂತೆ ಗೌರವಧನ ನೀಡಲಾಗುತ್ತಿದೆ. ಮುಂದುವರೆದು, ರೀಟೈನರ್‌ಷಿಪ್ ಆಧಾರದಲ್ಲಿ ನೇಮಕ

ಮಾಡುವ ಎಲ್ಲಾ ತಜ್ಞವೈದ್ಯರಿಗೆ ಸಂಬಂಧಿಸಿದಂತೆ ನೀಡಲಾಗುತ್ತಿದ್ದ ಗೌರವಧನವನ್ನು ಸಿ-ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ₹ 5,000 ದಿಂದ ₹ 10,000ಕ್ಕೆ ಹೆಚ್ಚಿಸಿ ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ₹ 6,000 ದಂತೆ ನೀಡಿ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಮುಂದುವರೆದು, ಸದರಿ ತಜ್ಞರು ಹೊರ ರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ ದಿನವೊಂದಕ್ಕೆ ₹ 1,000 ದಂತೆ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ.

3 ಮೇಲೆ ತಿಳಿಸಿದಂತೆ ಎನ್.ಆರ್.ಹೆಚ್ ಎಂ /ಕೆ.ಹೆಚ್ ಎಸ್.ಡಿ.ಆರ್.ಪಿ ಅಡಿಯಲ್ಲಿ ಅವಕಾಶಗಳನ್ನು ಕಲ್ಪಿಸಿದ್ದಾಗ್ಯೂ, ಎನ್.ಆರ್.ಹೆಚ್.ಎಂ. ಅಡಿಯಲ್ಲಿ ಕೇವಲ 60 ತಜ್ಞ ವೈದ್ಯರು ಮತ್ತು 70 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಹಾಗೂ ಕೆ.ಹೆಚ್.ಎಸ್.ಡಿ.ಆರ್.ಪಿ. ಅಡಿಯಲ್ಲಿ ಕೇವಲ 63 ವಿವಿಧ ತಜ್ಞತೆ ಹೊಂದಿರುವ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಒಟ್ಟಾರೆ, ಸರ್ಕಾರಿ ಆಸ್ಪತ್ರೆ/ಕೇಂದ್ರಗಳಲ್ಲಿ ತಜ್ಞ ವೈದ್ಯರು ಕರ್ತವ್ಯ ನಿರ್ವಹಿಸಲು ಮುಂದೆ ಬರುತ್ತಿರುವವರ ಸಂಖ್ಯೆ ಉತ್ತೇಜನಕಾರಿಯಾಗಿಲ್ಲ.

4. ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು, ಈ ಮೂಲಕ ಸ್ತ್ರೀರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ

5 ಕರ್ನಾಟಕ ಲೋಕಸೇವಾ ಆಯೋಗದ ಮೂಲಕ 600 ತಜ್ಞ ವೈದ್ಯರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಇತ್ತೀಚೆಗೆ ಕ್ರಮಕೈಗೊಳ್ಳಲಾಗಿ ಒಟ್ಟು 252 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರು ಆಯ್ಕೆಯಾದ ಎಲ್ಲಾ 252 ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿ ಮಾಡಲು ಕ್ರಮ ಕೈಗೊಳ್ಳಲಾಗಿ, ಕೇವಲ 137 ಅಭ್ಯರ್ಥಿಗಳು ಸ್ಥಳ ಆಯ್ಕೆ ಮಾಡಿಕೊಂಡರು. ಆ ಪೈಕಿ ಕೇವಲ 75 ಅಭ್ಯರ್ಥಿಗಳು ಮಾತ್ರ ಕಾರ್ಯವರದಿ ಮಾಡಿಕೊಂಡಿದ್ದಾರೆ

6. ಎಂ.ಬಿ.ಬಿ.ಎಸ್ ವಿದ್ಯಾರ್ಹತೆಯ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಒಟ್ಟು 2586 ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ ಇತ್ತೀಚೆಗೆ ಗುತ್ತಿಗೆ ಆಧಾರದ ಮೇಲೆ 118 ಅಲೋಪತಿ ಮತ್ತು 45 ಆಯುಷ್ ಹಾಗೂ 230 ಬಂಧ–ಪತ್ರ ಅನುಷ್ಠಾನಕೋಶದಿಂದ ನೇಮಕಗೊಂಡ ವೈದ್ಯರು ಸೇರಿದಂತೆ ಒಟ್ಟು 2341 ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ 245 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿಯಿವೆ. ದಿನಾಂಕ:28–6–2013 ರಂದು ಖಾಲಿ ಇರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲು ಜಿಲ್ಲಾಧಿಕಾರಿಗಳಿಗೆ ಸರ್ಕಾರವು ಅನುಮತಿ ನೀಡಿದೆ ನೇಮಕಾತಿ ಪ್ರಕ್ರಿಯೆಯು ಚಾಲ್ತಿಯಲ್ಲಿದೆ

7. ಇಲಾಖೆಯಲ್ಲಿ ಬ್ಯಾಕ್ ಲಾಗ್ ಇದ್ದ ಹುದ್ದೆಗಳಲ್ಲಿ 107 ಕಿರಿಯ ಆರೋಗ್ಯ ಸಹಾಯಕರು (ಪುರುಷ) ಮತ್ತು 16 ಫಾರ್ಮಸಿಸ್ಟ್ ಹುದ್ದೆಗಳಿಗೆ ನೇಮಕಾತಿ ಆದೇಶವನ್ನು ಇತ್ತೀಚೆಗೆ ನೀಡಲಾಗಿದೆ.

8. ಆರೋಗ್ಯ ಇಲಾಖೆಯಲ್ಲಿ ಈ ಕೆಳಕಂಡ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಪ್ರಕಿಯೆ ಜಾರಿಯಲ್ಲಿದ್ದು ಈ ಪ್ರಕ್ರಿಯೆಯು ಅಂತಿಮ ಹಂತದಲ್ಲಿರುತ್ತದೆ

ಕ್ರ ಸಂ	ಹುದ್ದೆಗಳ ಪದನಾಮ	ಅಧಿಸೂಚಿಸಿರುವ ಹುದ್ದೆಗಳ ಸಂಖ್ಯೆ
1	ಕಿರಿಯ ಆರೋಗ್ಯ ಸಹಾಯಕರು (ಪುರುಷ)	314
2	ಕಿರಿಯ ಆರೋಗ್ಯ ಸಹಾಯಕರು (ಮಹಿಳೆ)	735
3	ಕುಷ್ಠರೋಗದಿಂದ ಗುಣಮುಖ ಹೊಂದಿದ ಗ್ರೂಪ್ 'ಡಿ' ಹುದ್ದೆಗಳು	100
4	ಹಾಸ್ಪಿಟಲ್ ಅಟೆಂಡೆಂಟ್ ಗ್ರೇಡ್–2 ಗ್ರೂಪ್ 'ಡಿ'	2323
	ಒಟ್ಟು	**3579**

9 ಈ ಕೆಳಕಂಡ ಖಾಲಿ ಹುದ್ದೆಗಳನ್ನು ವಿಶೇಷ ನೇರ ನೇಮಕಾತಿ ಸಮಿತಿಯ ಮುಖಾಂತರ ಭರ್ತಿ ಮಾಡಲು ಆರ್ಥಿಕ ಇಲಾಖೆ ಅನುಮತಿ ನೀಡಿದ್ದು, ಹೈದ್ರಾಬಾದ್-ಕರ್ನಾಟಕ ಭಾಗದ ಮೀಸಲಾಗಿ ನಿಯಮಗಳ ಬಗ್ಗೆ ಆದೇಶ ಬಂದ ತಕ್ಷಣ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಕ್ರ ಸಂ	ಹುದ್ದೆ	ಭರ್ತಿ ಮಾಡುವ ಸಂಖ್ಯೆ
1	ವಾಹನ ಚಾಲಕರು	318
2	ಗ್ರೂಪ್ ಸಿ ವೃಂದದ ಅರೆವೈದ್ಯಕೀಯ ಹುದ್ದೆಗಳು	450
3	ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ	331
4	ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ	145
5	ಹಿರಿಯ ಪ್ರಯೋಗ ಶಾಲಾ ಟೆಕ್ನಾಲಾಜಿಸ್ಟ್	87
	ಒಟ್ಟು	1331

ಕೆ.ಎಸ್.ಆರ್ ಟಿ.ಸಿ. ಬಸ್ ನಿಲ್ದಾಣ ಕಾಮಗಾರಿ

445(828); ಶ್ರೀ ಐಹೊಳೆ ಡಿ. ಮಹಾಲಿಂಗಪ್ಪ

ಅ) ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದ ಆವರಣದ ಗೋಡೆ ಹಾಗೂ ರಸ್ತೆ ನಿರ್ಮಾಣದ ಟೆಂಡರ ಆಗಿದ್ದರೂ ಇದುವರೆಗೂ ಕಾಮಗಾರಿ ಪ್ರಾರಂಭವಾಗದೇ ಇರಲು ಕಾರಣಗಳೇನು? (ವಿವರ ಒದಗಿಸುವುದು)

ಆ) ಯಾವಾಗ ಕಾಮಗಾರಿ ಪ್ರಾರಂಭಿಸಲಾಗುವುದು?

ಇ) ರಾಯಭಾಗದಿಂದ ಬೆಂಗಳೂರು ಹಾಗೂ ಶಿರಡಿ ಪ್ರಯಾಣಿಕರ ಅನುಕೂಲಕ್ಕಾಗಿ ಐರಾವತ ವೋಲ್ವೋ ಬಸ್ ಓಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?